RNU AIR DHARWAD

JUNE 02, 2025

AKASHAVANI - DHARWAD

PRADESH SAMACHARA (KANNADA) 12 PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಕೇಂದ್ರದ ಬೆಂಬಲ ಬೆಲೆ ಯೋಜನೆಯಡಿ, ಜೋಳ ಖರೀದಿ ಪ್ರಕ್ರಿಯೆಯಲ್ಲಿ, ಲೋಪದೋಷಗಳಾಗದಂತೆ, ಅಗತ್ಯ ಕ್ರಮ ಕೈಗೊಳ್ಳಲು, ಹಿರಿಯ ಸಚಿವರುಗಳು, ಬೆಂಗಳೂರಿನಲ್ಲಿ ಜರುಗಿದ ವಿಶೇಷ ಸಭೆಯಲ್ಲಿ, ಆಯಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ, 2024–25ನೇ ಸಾಲಿನ, ಮುಂಗಾರು ಹಾಗೂ ಹಿಂಗಾರು ಜೋಳ ಖರೀದಿ, ವ್ಯವಸ್ಥಿತವಾಗಿ ಕೈಗೊಳ್ಳುವಂತೆ, ಸಚಿವರಾದ ಕೆ.ಎಚ್.ಮುನಿಯಪ್ಪ, ಎಚ್.ಕೆ.ಪಾಟೀಲ, ಶರಣಪ್ರಕಾಶ ಪಾಟೀಲ ಹಾಗೂ ಎನ್.ಎಸ್.ಬೋಸರಾಜು ಸೂಚಿಸಿದರು.

<><><>

ರಾಜ್ಯದ ವಿವಿಧೆಡೆಗಳಲ್ಲಿ, ಉತ್ತಮ ಮುಂಗಾರು ಮಳೆಯಾದ ಹಿನ್ನೆಲೆ, ಬಿತ್ತನೆ ಕಾರ್ಯ ಚುರುಕುಗೊಂಡಿದೆ. ಕೃಷಿ ಇಲಾಖೆ ವತಿಯಿಂದ, ರೈತರಿಗೆ ಅಗತ್ಯ ಬಿತ್ತನೆ ಬೀಜ ಹಾಗೂ ಸಂಯುಕ್ತ ರಸಗೊಬ್ಬರವನ್ನು ಪೂರೈಕೆ ಮಾಡಲಾಗುತ್ತಿದೆ. ಧಾರವಾಡ ಜಿಲ್ಲೆ ಕುಂದಗೋಳ ತಾಲೂಕಿನಲ್ಲಿ ಬಿತ್ತನೆ ಬೀಜಗಳ ಲಭ್ಯತೆ ಹಾಗೂ ಪೂರೈಕೆ ಬಗ್ಗೆ ಮಾಹಿತಿ ನೀಡಿದ್ದಾರೆ, ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ಭಾರತಿ ಮೆಣಸಿನಕಾಯಿ.

<><><>

ಧ್ವನಿ: ಭಾರತಿ ಮೆಣಸಿನಕಾಯಿ 37 ಸೆಕೆಂದುಗಳು

<><><>

ಮಂಡ್ಯ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರಾಗಿ, ದ್ವಿದಳಧಾನ್ಯ, ಮುಸುಕಿನ ಜೋಳ ಹಾಗೂ ಎಣ್ಣೆಕಾಳು ಬೆಳೆಗಳ ಬಿತ್ತನೆ ಬೀಜ, ಹಸಿರೆಲೆ ಗೊಬ್ಬರ ಹಾಗೂ ಲಘು ಪೋ ಕಾಂಶಗಳನ್ನು ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ ಎಂದು ಜಂಟಿ ಕೃಷಿ ನಿರ್ದೇಶಕ ವಿ.ಎಸ್ ಅಶೋಕ ತಿಳಿಸಿದ್ದಾರೆ. ಜಿಲ್ಲೆಯಲ್ಲಿ, ಪ್ರಸ್ತುತ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳಿಗೆ ಯಾವುದೇ ಕೊರತೆಯಿರುವುದಿಲ್ಲ ಎಂದು ಅವರು ಮಾಹಿತಿ ನೀಡಿದ್ದಾರೆ.

<><><>

ಮುಂಗಾರು ಹಂಗಾಮಿನಲ್ಲಿ, ತೊಗರಿ, ಹೆಸರಿನ ಬಿತ್ತನೆ ಬೀಜಗಳಿಗೆ, ಬೀಜೋಪಚಾರ ಕೈಗೊಳ್ಳುವಂತೆ, ಕೃಷಿ ಇಲಾಖೆ ಯಾದಗಿರಿ ಜಿಲ್ಲೆ ಉಪ ನಿರ್ದೇಶಕಿ ಮಂಜುಳಾ ಕೋರಿದ್ದಾರೆ.

<><><>

ಮೀನುಗಾರಿಕೆಯನ್ನು, ವೃತ್ತಿಪರ ಹಾಗೂ ಲಾಭದಾಯಕವಾಗಿಸಲು, ಮೀನುಗಾರಿಕಾ ಇಲಾಖೆ, ಮೀನುಗಾರರಿಗೆ ತರಬೇತಿ ನೀಡಲು, ಪ್ರತ್ಯೇಕ ತರಬೇತಿ ಕೇಂದ್ರ ಕಾರ್ಯನಿರ್ವಹಿಸಲಿದೆ ಎಂದು, ಉತ್ತರಕನ್ನಡ ಜಿಲ್ಲಾ ಉಸ್ತುವಾರಿ ಸಚಿವ, ಮಂಕಾಳ ವೈದ್ಯ ತಿಳಿಸಿದ್ದಾರೆ. ಕುಮಟಾದಲ್ಲಿ ಮೀನುಗಾರಿಕಾ ತರಬೇತಿಯ ನೂತನ ಕಟ್ಟಡ ಉದ್ಘಾಟಿಸಿ, ಅವರು ಮಾತನಾಡಿದರು. ಮೀನುಗಾರಿಕೆ ನಡೆಸುವಾಗ ಮೃತಪಟ್ಟ ಮೀನುಗಾರರ ಕುಟುಂಬಕ್ಕೆ ನೀಡುವ ಪರಿಹಾರ ಮೊತ್ತವನ್ನು, 8 ಲಕ್ಷ ದಿಂದ 10 ಲಕ್ಷಕ್ಕೆ ಹೆಚ್ಚಿಸಲಾಗುವುದು. ಮತ್ಸ್ಯಾಶ್ರಯ ಮನೆಗಳನ್ನು ಒದಗಿಸಲು, ಕ್ರಮ ಕೈಗೊಳ್ಳುವುದಾಗಿ, ಹೇಳಿದರು.

<><><>

ವಿಜಯಪುರ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನಿರ್ಮಿಸಲಾದ ಇಂದಿರಾ ಕ್ಯಾಂಟಿನ್ ಅನ್ನು, ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಖಾತೆ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ ಎಂ.ಬಿ.ಪಾಟೀಲ ಉದ್ಘಾಟಿಸಿದರು.

<><><>

ರಾಜ್ಯ ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು ವತಿಯಿಂದ, ಗದಗ ಜಿಲ್ಲೆ, ಲಕ್ಕುಂಡಿ ಗ್ರಾಮದಲ್ಲಿ ಉತ್ಖನನ ಹಾಗೂ ಸಂಶೋಧನಾ ಕಾರ್ಯ ಆರಂಭಗೊಳ್ಳಲಿದೆ. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ, ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ, ನಾಳೆ ಬೆಳಗ್ಗೆ 11 ಗಂಟೆ 45 ನಿಮಿಷಕ್ಕೆ, ಐತಿಹಾಸಿಕ ಲಕ್ಕುಂಡಿ ಪ್ರದೇಶದ ಉತ್ಖನನ ಕಾರ್ಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಲಿದ್ದಾರೆ. ಪುರಾತನ ದೇವಸ್ಥಾನಗಳು, ಜಿನಾಲಯ, ಕಲ್ಯಾಣಿಗಳು ಇರುವ ಲಕ್ಕುಂಡಿಯಲ್ಲಿ ಶಿಲ್ಪಕಲೆ ಸಂಶೋಧನೆಯ ನಿಟ್ಟಿನಲ್ಲಿ ಈ ಉತ್ಖನನ ಮಹತ್ವದ್ದಾಗಿದೆ.

<><><>

ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರ ಹಾಗೂ ವಿರಾಜಪೇಟೆ ಶಾಸಕ, ಎ.ಎಸ್.ಪೊನ್ನಣ್ಣ, ಕೊಡಗಿನ ವಿವಿಧೆಡೆ, ಮಳೆಯಿಂದ ಹಾನಿಯಾದ ಪ್ರದೇಶಗಳಿಗೆ ಭೇಟಿ ನೀಡಿ, ವೀಕ್ಷಿಸಿದರು. ವಿರಾಜಪೇಟೆ ತಾಲೂಕಿನ, ಬೆಟೋಳಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ತಡೆಗೋಡೆ ಪರಿಶೀಲಿಸಿದರು.

<><><>

ತೈಲ ಕಂಪೆನಿಗಳು, ವಾಣಿಜ್ಯಿಕ ಬಳಕೆಯ, 19 ಕಿಲೋ ಎಲ್.ಪಿ.ಜಿ. ಸಿಲಿಂಡರ್ ಬೆಲೆಯನ್ನು, 24 ರೂಪಾಯಿಗಳ ಷ್ಟು ಇಳಿಸಿದೆ. ಗೃಹ ಬಳಕೆಯ ಎಲ್.ಪಿ.ಜಿ. ಸಿಲಿಂಡರ್‌ಗಳ ಬೆಲೆಯಲ್ಲಿ, ಯಾವುದೇ ವ್ಯತ್ಯಾಸವಿಲ್ಲ. ಕಳೆದ ಏಪ್ರಿಲ್‌ನಲ್ಲಿ, ಗೃಹ ಬಳಕೆ ಎಲ್.ಪಿ.ಜಿ. ಸಿಲಿಂಡರ್‌ಗಳ ಬೆಲೆಯನ್ನು, 41 ರೂಪಾಯಿಗಳ ಷ್ಟು ಕಡಿಮೆ ಮಾಡಲಾಗಿತ್ತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>